## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಂ.ಕೆ. ಕೆಂಪೇಗೌಡ, ಜಂಟಿ ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಇವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತ್ ರಾಜ್ ವಿಭಾಗಕ್ಕೆ ಸಲಹೆಗಾರರನ್ನಾಗಿ ನೇಮಿಸುವ ಬಗ್ಗೆ.

ಓದಲಾಗಿದೆ:

ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ರವರ ಅಧಿಕೃತ ಜ್ಞಾಪನ ಸಂಖ್ಯೆ:ಗ್ರಾಅಪ 35 ಸಾಪನಿ(ಉಖಾಯೋ)2019 ದಿನಾಂಕ:29-04-2019.

ಪ್ರಸ್ತಾವನೆ:

ಮೇಲೆ ಓದಲಾದ ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ರವರ ಅಧಿಕೃತ ಜ್ಞಾಪನದಲ್ಲಿ ಶ್ರೀ ಎಂ.ಕೆ. ಕೆಂಪೇಗೌಡ, ನಿರ್ದೇಶಕರು (ನಿವೃತ್ತ) (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯದಲ್ಲಿ ಗುತ್ತಿಗೆ ಆಧಾರದ ಮೇಲೆ ಜಂಟಿ ನಿರ್ದೇಶಕರ ಹುದ್ದೆಗೆ ನೇಮಕಾತಿ ಮಾಡಲಾಗಿದೆ. ಶ್ರೀ ಎಂ.ಕೆ. ಕೆಂಪೇಗೌಡ, ಇವರು ಪಂಚಾಯತ್ ರಾಜ್ ವಿಷಯದಲ್ಲಿ ಹೆಚ್ಚಿನ ಅನುಭವ ಹಾಗೂ ಪರಿಣಿತಿ ಹೊಂದಿರುವುದರಿಂದ ಇವರನ್ನು ಜಂಟಿ ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ ಕೆಲಸದ ಜೊತೆಗೆ ಹೆಚ್ಚುವರಿಯಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತ್ ರಾಜ್ ವಿಭಾಗಕ್ಕೆ ಸಲಹೆಗಾರರನ್ನಾಗಿ ನೇಮಿಸಿಕೊಂಡು ಪಂಚಾಯತ್ ರಾಜ್ ವಿಷಯಗಳಲ್ಲಿ ನೆರವು ಪಡೆಯಲು ಮತ್ತು ಈ ವಿಷಯಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಲು ಅವರಿಗೆ ಸೂಕ್ತ ಸಂಪನ್ಮೂಲ ವ್ಯಕ್ತಿಗಳು ಹಾಗೂ ಸಿಬ್ಬಂದಿ ನೆರವು ನೀಡಲು ಮತ್ತು ಸಚಿವಾಲಯದಲ್ಲಿ ಸೂಕ್ತ ಸ್ಥಳಾವಕಾಶ ಕಲ್ಪಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 458 ಗ್ರಾಪಂಅ 2019
### ಬೆಂಗಳೂರು, ದಿನಾಂಕ: 30-05-2019.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಎಂ.ಕೆ. ಕೆಂಪೇಗೌಡ, ಜಂಟಿ ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ ಇವರನ್ನು ಸದರಿ ಕೆಲಸದ ಜೊತೆಗೆ ಹೆಚ್ಚುವರಿಯಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತ್ ರಾಜ್ ವಿಭಾಗಕ್ಕೆ ಸಲಹೆಗಾರರನ್ನಾಗಿ ನೇಮಿಸಿ ಆದೇಶಿಸಿದೆ. ಶ್ರೀ ಎಂ.ಕೆ. ಕೆಂಪೇಗೌಡ ಇವರು ಈ ಕೆಳಕಂಡ ಪಂಚಾಯತ್ ರಾಜ್ ವಿಷಯಗಳಲ್ಲಿ ನೆರವು ನೀಡಲು ಮತ್ತು ಈ ವಿಷಯಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಲು ಸೂಚಿಸಿದೆ.

1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ಕ್ಕೆ ಅವಶ್ಯ ತಿದ್ದುಪಡಿ ತರಲು ಅವಶ್ಯವಿರುವ ನಿಯಮಗಳನ್ನು ರಚಿಸಲು, ಸುತ್ತೋಲೆಗಳನ್ನು ಹೊರಡಿಸುವ ವಿಷಯಗಳು.
2) ಗ್ರಾಮ ಪಂಚಾಯತಿಗಳ ತೆರಿಗೆ ನಿರ್ಧರಣೆ, ಪರಿಷ್ಕರಣೆಗೆ ಸಂಬಂಧಿಸಿದಂತೆ ಸುಧಾರಣಾ ಕ್ರಮಗಳನ್ನು ಕೈಗೊಳ್ಳುವ ವಿಷಯಗಳು.
3) ಇ-ಸ್ವತ್ತು ಅನುಷ್ಠಾನಕ್ಕೆ ಸಂಬಂಧಿಸಿದ ವಿಷಯಗಳು.
4) ಗ್ರಾಮ ಪಂಚಾಯತ್ ನೌಕರರ ಸೇವಾ ವಿಷಯಗಳು.

5) ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ನೀಡುವ ತರಬೇತಿಯ ವಿಷಯಗಳು ಮತ್ತು ವಿವಿಧ ಇಲಾಖೆಗಳ ಗ್ರಾಮ ಪಂಚಾಯತಿಯ ಮಟ್ಟದ ಉಪಸಮಿತಿಗಳ ವಿಷಯಗಳು.

6) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಪ್ರಕಟಿಸಲಾಗುತ್ತಿರುವ ಕರ್ನಾಟಕ ವಿಕಾಸ ಮಾಸ ಪತ್ರಿಕೆ ಉತ್ತಮವಾಗಿ ಹೊರ ತರುವ ವಿಷಯಗಳು.

ಮೇಲಿನ ಕ್ರಮಕ್ಕೆ ಅವಶ್ಯಕತೆಗನುಗುಣವಾಗಿ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್‌ಗಳು ಹಾಗೂ ಕ್ಷೇತ್ರ ಭೇಟಿ ನೀಡಿ ಅಧಿಕಾರಿಗಳು ಹಾಗೂ ಚುನಾಯಿತ ಪ್ರತಿನಿಧಿಗಳ ಜೊತೆ ಚರ್ಚಿಸಿ ಮಾಹಿತಿ ಪಡೆಯಬಹುದು.

ಸಲಹೆಗಾರರಿಗೆ ಈ ವಿಷಯಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಲು ಅವರಿಗೆ ಸೂಕ್ತ ಸಂಪನ್ಮೂಲ ವ್ಯಕ್ತಿಗಳು ಹಾಗೂ ಸಿಬ್ಬಂದಿ ನೆರವು ನೀಡಲು ಮತ್ತು ಸಚಿವಾಲಯದಲ್ಲಿ ಸೂಕ್ತ ಸ್ಥಳಾವಕಾಶ ಕಲ್ಪಿಸಲು ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30/5/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರುಗಳು / ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2) ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3) ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಮೊದಲನೆ ಮಹಡಿ, ಅಭಯ ಕಾಂಪ್ಲೇಕ್ಸ್, ಕೊಳಗೇರಿ ಅಭಿವೃದ್ಧಿ ಮಂಡಳಿ ಕಟ್ಟಡ, 55. ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020.
4) ಜಂಟಿ ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಮೊದಲನೆ ಮಹಡಿ, ಅಭಯ ಕಾಂಪ್ಲೇಕ್ಸ್, ಕೊಳಗೇರಿ ಅಭಿವೃದ್ಧಿ ಮಂಡಳಿ ಕಟ್ಟಡ, 55. ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020.
5) ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
4. ನಿರ್ದೇಶಕರು (ಪಂ.ರಾಜ್-1) ಮತ್ತು (ಪಂ.ರಾಜ್-2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.